ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಗುರುವಾರ, ದಿನಾಂಕ: 18ನೇ ಜುಲೈ, 2019

ಬೆಂಗಳೂರಿನಿಂದ ಮಡಿಕೇರಿಗೆ ಪ್ರತಿನಿತ್ಯ ಸ್ಲೀಪರ್ ಬಸ್ ಸೇವೆಯನ್ನು ಒದಗಿಸುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):-

345 (532) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರಿನಿಂದ ಮಡಿಕೇರಿಗೆ ಹಾಗೂ ಮಡಿಕೇರಿಯಿಂದ ಬೆಂಗಳೂರಿಗೆ ಪ್ರತಿನಿತ್ಯ ರಾತ್ರಿ ವೇಳೆ ಸ್ಲೀಪರ್ ಕೋಚ್ ಬಸ್ ಸೇವೆ ಸೌಲಭ್ಯ ಇಲ್ಲದಿರುವುದರಿಂದ ವಿಶೇಷವಾಗಿ ವೃದ್ದರು ಹಾಗೂ ಮಹಿಳೆಯರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರತಿನಿತ್ಯ ರಾತ್ರಿ ವೇಳೆ ಬೆಂಗಳೂರಿನಿಂದ (ಮೆಜೆಸ್ಟಿಕ್ ನಿಲ್ದಾಣದಿಂದ) ಮಡಿಕೇರಿಗೆ ಹಾಗೂ ಮಡಿಕೇರಿಯಿಂದ ಬೆಂಗಳೂರಿಗೆ (ಮೆಜೆಸ್ಟಿಕ್ ನಿಲ್ದಾಣಕ್ಕೆ) ತಲುಪುವಂತೆ ಸ್ಲೀಪರ್ ಕೋಚ್ ಬಸ್ ಸೇವೆಯನ್ನು ಕಲ್ಪಿಸಲಾಗುವುದೇ ;

(ಇ) ಯಾವ ಕಾಲಮಿತಿಯೊಳಗೆ ಸದರಿ ಸೇವೆಯನ್ನು ಕಲ್ಪಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗುವುದು ?